ಸೋಮವಾರ
03 ಆಗಸ್ಟ್, 2026
ಸಂಪುಟ 02 । ಸಂಚಿಕೆ 53
04 ಪುಟಗಳು । ಬೆಲೆ 5.00 ರೂ
Mob: 9538786812
Office: 9480847498

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ



ಸಂಪಾದಕರು
ಅಭಿಷೇಕ್ ಡಿ.ಆರ್

# ವಿಮಾನ ನಿಲ್ದಾಣದಿಂದ ಹೆದ್ದಾರಿವರೆಗೆ: ಮೆಗಾ ಅಭಿವೃದ್ಧಿ ಯೋಜನೆಗಳ ಘೋಷಣೆ

## ವಿಮಾನ ನಿಲ್ದಾಣ ಉದ್ಘಾಟನೆ ಸೇರಿ 17,900 ಕೋಟಿ ರೂ ಯೋಜನೆಗಳಿಗೆ ಪ್ರಧಾನಿ ಮೋದಿ ಚಾಲನೆ



**ವಿಶಾಖಪಟ್ಟಣಂ:** ಆಂಧ್ರಪ್ರದೇಶವನ್ನು ಕೈಗಾರಿಕೆ, ವಿಮಾನಯಾನ, ಮೂಲಸೌಕರ್ಯ, ಹಸಿರು ಇಂಧನ ಹಾಗೂ ಆಧುನಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ದೇಶದ ಮುಂಚೂಣಿ ರಾಜ್ಯವನ್ನಾಗಿ ರೂಪಿಸುವ ಮಹತ್ವಾಕಾಂಕ್ಷಿ ಗುರಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ವಿಜಯನಗರಂ ಜಿಲ್ಲೆಯ ಭೋಗಾಪುರಂನಲ್ಲಿ ಅಲ್ಲೂರಿ ಸೀತಾರಾಮ ರಾಜು ಅಂತರರಾಷ್ಟ್ರೀಯ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣವನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ಇದೇ ಸಂದರ್ಭದಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ಜಾರಿಗೊಳ್ಳಲಿರುವ 17,900 ಕೋಟಿಗೂ ಅಧಿಕ ಮೌಲ್ಯದ ಹಲವು ಬೃಹತ್ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿ, ಕೆಲವು ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಈ ಯೋಜನೆಗಳು ಆಂಧ್ರಪ್ರದೇಶದ ಆರ್ಥಿಕ ಬೆಳವಣಿಗೆ, ಕೈಗಾರಿಕಾ ಹೂಡಿಕೆ, ಮೂಲಸೌಕರ್ಯ ವಿಸ್ತರಣೆ ಹಾಗೂ ಉದ್ಯೋಗ ಸೃಷ್ಟಿಗೆ ಹೊಸ ವೇಗ ನೀಡಲಿವೆ ಎಂದು ಪ್ರಧಾನಿ ಹೇಳಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಣಕ್ಕೆ ಆಧುನಿಕ ಮೂಲಸೌಕರ್ಯವೇ ಅಡಿಪಾಯವಾಗಿದೆ. ವಿಮಾನ ನಿಲ್ದಾಣಗಳು, ರಾಷ್ಟ್ರೀಯ ಹೆದ್ದಾರಿಗಳು, ರೈಲು ಮಾರ್ಗಗಳು, ಬಂದರುಗಳು ಹಾಗೂ ಡಿಜಿಟಲ್ ಸಂಪರ್ಕ ವ್ಯವಸ್ಥೆಗಳನ್ನು ಬಲಪಡಿಸುವ ಮೂಲಕ ದೇಶದ ಆರ್ಥಿಕತೆಗೆ ಹೊಸ ಶಕ್ತಿ ನೀಡಲಾಗುತ್ತಿದೆ. ಕಳೆದ ಕೆಲವು ವರ್ಷಗಳಲ್ಲಿ ಭಾರತದಲ್ಲಿ ಮೂಲಸೌಕರ್ಯ ಕ್ಷೇತ್ರದಲ್ಲಿ ದಾಖಲೆ ಮಟ್ಟದ ಹೂಡಿಕೆ ಮಾಡಲಾಗಿದ್ದು, ಅದರ ನೇರ ಲಾಭ ರಾಜ್ಯಗಳ ಅಭಿವೃದ್ಧಿಗೆ ದೊರೆಯುತ್ತಿದೆ ಎಂದು ಹೇಳಿದರು.

ಆಂಧ್ರಪ್ರದೇಶವು ತನ್ನ ಭೌಗೋಳಿಕ ಸ್ಥಾನಮಾನ, ಕಡಲತೀರ, ಬಂದರುಗಳು ಹಾಗೂ ಕೈಗಾರಿಕಾ ಸಾಮರ್ಥ್ಯದ ಮೂಲಕ ದೇಶದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಬಲ್ಲ ರಾಜ್ಯವಾಗಿದೆ. ಈ ಸಾಮರ್ಥ್ಯವನ್ನು ಇನ್ನಷ್ಟು ವಿಸ್ತರಿಸಲು ಕೇಂದ್ರ ಸರ್ಕಾರ ವಿಮಾನಯಾನ, ಹೆದ್ದಾರಿ, ಇಂಧನ, ಕೈಗಾರಿಕೆ ಮತ್ತು ಸೆಮಿಕಂಡಕ್ಟರ್ ಕ್ಷೇತ್ರಗಳಲ್ಲಿ ದೊಡ್ಡ ಮಟ್ಟದ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಇವು ರಾಜ್ಯವನ್ನು ಹೂಡಿಕೆದಾರರ ಪ್ರಮುಖ ತಾಣವನ್ನಾಗಿ ರೂಪಿಸುವುದರ ಜೊತೆಗೆ ಲಕ್ಷಾಂತರ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಲಿವೆ ಎಂದು ಪ್ರಧಾನಿ ಹೇಳಿದರು.ಭೋಗಾಪುರಂ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣಕ್ಕೆ ಚಾಲನೆ: ಸುಮಾರು 5,640 ಕೋಟಿಗೂ ಅಧಿಕ ವೆಚ್ಚದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ನಿರ್ಮಾಣಗೊಂಡಿರುವ ಅಲ್ಲೂರಿ ಸೀತಾರಾಮ ರಾಜು ಅಂತರರಾಷ್ಟ್ರೀಯ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣವು ದೇಶದ ಅತ್ಯಾಧುನಿಕ ವಿಮಾನ ನಿಲ್ದಾಣಗಳಲ್ಲಿ ಒಂದಾಗಿದೆ. ವಾರ್ಷಿಕವಾಗಿ ಸುಮಾರು 60 ಲಕ್ಷ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯ ಹೊಂದಿರುವ ಈ ವಿಮಾನ ನಿಲ್ದಾಣವನ್ನು ಮುಂದಿನ ಬೇಡಿಕೆಗೆ ಅನುಗುಣವಾಗಿ ಇನ್ನಷ್ಟು ವಿಸ್ತರಿಸುವ ಅವಕಾಶವೂ ಇದೆ.

ಈ ವಿಮಾನ ನಿಲ್ದಾಣ ಕಾರ್ಯಾರಂಭದಿಂದ ವಿಶಾಖಪಟ್ಟಣಂ, ವಿಜಯನಗರಂ, ಶ್ರೀಕಾಕುಳಂ ಸೇರಿದಂತೆ ಉತ್ತರ ಆಂಧ್ರ ಭಾಗದ ಜನರಿಗೆ ಉತ್ತಮ ವಿಮಾನ ಸಂಪರ್ಕ ದೊರೆಯಲಿದೆ. ದೇಶೀಯ ಮತ್ತು ಅಂತರರಾಷ್ಟ್ರೀಯ ವಿಮಾನ ಸೇವೆಗಳು ವಿಸ್ತರಣೆಯಾಗುವುದರಿಂದ ಪ್ರವಾಸೋದ್ಯಮ, ಮಾಹಿತಿ ತಂತ್ರಜ್ಞಾನ, ಕೈಗಾರಿಕೆ, ರಫ್ತು–ಆಮದು ಹಾಗೂ ವಿದೇಶಿ ಹೂಡಿಕೆಗಳಿಗೆ ಹೊಸ ಉತ್ತೇಜನ ಸಿಗಲಿದೆ. ಸ್ಥಳೀಯ ಉದ್ಯಮಗಳಿಗೆ ಹೊಸ ಮಾರುಕಟ್ಟೆಗಳು ತೆರೆದುಕೊಳ್ಳಲಿದ್ದು, ಸಾವಿರಾರು ಯುವಕರಿಗೆ ನೇರ ಹಾಗೂ ಪರೋಕ್ಷ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ.

ವಿಮಾನ ನಿಲ್ದಾಣ ಉದ್ಘಾಟನೆಯ ಬಳಿಕ ಪ್ರಧಾನಿ ಮೋದಿ ಪ್ರಯಾಣಿಕರ ಟರ್ಮಿನಲ್, ಚೆಕ್–ಇನ್ ವ್ಯವಸ್ಥೆ, ಭದ್ರತಾ ವಿಭಾಗ, ಬ್ಯಾಗೇಜ್ ನಿರ್ವಹಣಾ ವ್ಯವಸ್ಥೆ ಹಾಗೂ ವಿವಿಧ ಸೌಲಭ್ಯಗಳನ್ನು ಪರಿಶೀಲಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಆಂಧ್ರಪ್ರದೇಶದ ರಾಜ್ಯಪಾಲ ಎಸ್. ಅಬ್ದುಲ್ ನಜೀರ್, ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ಉಪಮುಖ್ಯಮಂತ್ರಿ ಪವನ್ ಕಲ್ಯಾಣ್, ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ. ರಾಮ್ ಮೋಹನ್ ನಾಯ್ಡು, ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಚಿವರು, ಸಂಸದರು, ಶಾಸಕರು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ವಿಶ್ವಮಟ್ಟದ ತಂತ್ರಜ್ಞಾನ ಹೊಂದಿದ ವಿಮಾನ ನಿಲ್ದಾಣ:** ಭೋಗಾಪುರಂ ವಿಮಾನ ನಿಲ್ದಾಣವನ್ನು ಸಂಪೂರ್ಣ ಡಿಜಿಟಲ್ ಹಾಗೂ ಸ್ಮಾರ್ಟ್ ತಂತ್ರಜ್ಞಾನಗಳೊಂದಿಗೆ ಅಭಿವೃದ್ಧಿಪಡಿಸಲಾಗಿದೆ. ಕೃತಕ ಬುದ್ಧಿಮತ್ತೆ ಆಧಾರಿತ ಕಾರ್ಯಾಚರಣೆ, ಬಯೋಮೆಟ್ರಿಕ್ ಪ್ರಯಾಣಿಕರ ಗುರುತಿನ ವ್ಯವಸ್ಥೆ, ಸ್ವಯಂಚಾಲಿತ ಬ್ಯಾಗೇಜ್ ನಿರ್ವಹಣೆ, ಬಿಲ್ಡಿಂಗ್ ಇನ್‌ಫರ್ಮೇಷನ್ ಮಾಡೆಲಿಂಗ್, ಸ್ಮಾರ್ಟ್ ಆಪರೇಷನ್ ಮಾನಿಟರಿಂಗ್ ಸಿಸ್ಟಮ್, ಡಿಜಿಟಲ್ ಭದ್ರತಾ ವ್ಯವಸ್ಥೆ ಸೇರಿದಂತೆ ಹಲವು ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಲಾಗಿದೆ. ಇದರಿಂದ ಪ್ರಯಾಣಿಕರಿಗೆ ಕಡಿಮೆ ಸಮಯದಲ್ಲಿ ಗುಣಮಟ್ಟದ ಹಾಗೂ ಸುರಕ್ಷಿತ ಸೇವೆ ದೊರೆಯಲಿದೆ.

ಈ ವಿಮಾನ ನಿಲ್ದಾಣವನ್ನು ಪರಿಸರ ಸ್ನೇಹಿ ಮಾದರಿಯಲ್ಲಿ ನಿರ್ಮಿಸಲಾಗಿದೆ. 5 ಮೆಗಾವ್ಯಾಟ್ ಸಾಮರ್ಥ್ಯದ ಸೌರ ವಿದ್ಯುತ್ ಘಟಕ, ಮಳೆನೀರು ಕೊಯ್ಲು ವ್ಯವಸ್ಥೆ, ಇಂಧನ ಉಳಿತಾಯ ತಂತ್ರಜ್ಞಾನ, ಎಲೆಕ್ಟ್ರಿಕ್ ವಾಹನ ಚಾರ್ಜಿಂಗ್ ಕೇಂದ್ರಗಳು, ಆಧುನಿಕ ತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಹಾಗೂ ಹಸಿರು ಕಟ್ಟಡ ತಂತ್ರಜ್ಞಾನಗಳನ್ನು ಅಳವಡಿಸಲಾಗಿದೆ.

ವಿಮಾನ ನಿಲ್ದಾಣದ ಟರ್ಮಿನಲ್ ಕಟ್ಟಡವು ಆಂಧ್ರಪ್ರದೇಶದ ಸಾಂಪ್ರದಾಯಿಕ ಚುಟ್ಟಿಲು ಮನೆಗಳು, ಅರಕು ಕಣಿವೆಯ ನೈಸರ್ಗಿಕ ಸೌಂದರ್ಯ ಹಾಗೂ ಹಾರುವ ಮೀನಿನ ಆಕೃತಿಯಿಂದ ಸ್ಫೂರ್ತಿ ಪಡೆದಿರುವುದು ಇದರ ವಿಶೇಷ ಆಕರ್ಷಣೆಯಾಗಿದೆ.

**ಆಂಧ್ರದ ಮೊದಲ ಸೆಮಿಕಂಡಕ್ಟರ್ ಉತ್ಪಾದನಾ ಘಟಕ:** ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ಆಂಧ್ರಪ್ರದೇಶದ ಮೊದಲ ಸೆಮಿಕಂಡಕ್ಟರ್ ಉತ್ಪಾದನಾ ಘಟಕಕ್ಕೂ ಶಂಕುಸ್ಥಾಪನೆ ನೆರವೇರಿಸಿದರು. ದಕ್ಷಿಣ ಕೊರಿಯಾದ ಎಪಿಎಸಿಟಿ ಸಂಸ್ಥೆಯ ಸಹಭಾಗಿತ್ವದಲ್ಲಿ ಎಎಸ್‌ಐಪಿ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಈ ಯೋಜನೆಯನ್ನು ಅಭಿವೃದ್ಧಿಪಡಿಸುತ್ತಿದೆ.

460 ಕೋಟಿಗೂ ಅಧಿಕ ಹೂಡಿಕೆಯ ಈ ಘಟಕದಲ್ಲಿ ವರ್ಷಕ್ಕೆ ಸುಮಾರು 9.6 ಕೋಟಿ ಸೆಮಿಕಂಡಕ್ಟರ್ ಚಿಪ್‌ಗಳನ್ನು ಉತ್ಪಾದಿಸುವ ಗುರಿ ಹೊಂದಲಾಗಿದೆ. ಈ ಯೋಜನೆಯಿಂದ ಅತ್ಯಾಧುನಿಕ ಎಲೆಕ್ಟ್ರಾನಿಕ್ಸ್ ಉತ್ಪಾದನೆಗೆ ಉತ್ತೇಜನ ದೊರೆಯಲಿದ್ದು, ರಾಜ್ಯದಲ್ಲಿ ಉನ್ನತ ಕೌಶಲ್ಯದ ಉದ್ಯೋಗಾವಕಾಶಗಳು ಹೆಚ್ಚಲಿವೆ. ಜೊತೆಗೆ ಸೆಮಿಕಂಡಕ್ಟರ್ ಉತ್ಪಾದನೆಗೆ ಸಂಬಂಧಿಸಿದ ಪೂರಕ ಕೈಗಾರಿಕೆಗಳಿಗೂ ಉತ್ತೇಜನ ದೊರೆಯಲಿದೆ.

ಸುಮಾರು 5,550 ಕೋಟಿ ವೆಚ್ಚದ ಕರ್ನೂಲ್ ನವೀಕರಿಸಬಹುದಾದ ಇಂಧನ ಪ್ರಸರಣ ಯೋಜನೆ ಹಂತಗೂ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಿದರು. ಕರ್ನೂಲ್ ಹಾಗೂ ಅನಂತಪುರ ಜಿಲ್ಲೆಗಳ ಸೌರ ಮತ್ತು ಗಾಳಿ ವಿದ್ಯುತ್ ಉತ್ಪಾದನಾ ಯೋಜನೆಗಳಿಗೆ ಅಗತ್ಯವಿರುವ ಪ್ರಸರಣ ಮೂಲಸೌಕರ್ಯ ನಿರ್ಮಾಣಕ್ಕೆ ಈ ಯೋಜನೆ ನೆರವಾಗಲಿದೆ.

ಈ ಯೋಜನೆಗಳಿಂದ ಹೆಚ್ಚಿನ ಪ್ರಮಾಣದ ಹಸಿರು ವಿದ್ಯುತ್ ರಾಷ್ಟ್ರೀಯ ವಿದ್ಯುತ್ ಜಾಲಕ್ಕೆ ಸೇರ್ಪಡೆಯಾಗಲಿದ್ದು, ಸ್ವಚ್ಛ ಇಂಧನ ಉತ್ಪಾದನೆಯಲ್ಲಿ ಆಂಧ್ರಪ್ರದೇಶದ ಪಾತ್ರ ಮತ್ತಷ್ಟು ಬಲಗೊಳ್ಳಲಿದೆ.

**ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಚಾಲನೆ:** ಸುಮಾರು 1,880 ಕೋಟಿಗೂ ಅಧಿಕ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೂ ಪ್ರಧಾನಿ ಚಾಲನೆ ನೀಡಿದರು. ರೆಚರ್ಲಾ–ಗುರುವಾಯಗುಡೆಂ, ಗುರುವಾಯಗುಡೆಂ–ದೇವರಪಲ್ಲಿ ನಡುವಿನ ನಾಲ್ಕು ಪಥದ ಗ್ರೀನ್‌ಫೀಲ್ಡ್ ಹೆದ್ದಾರಿ, ಎನ್‌ಎಚ್–67ರ ತಾಡಿಪತ್ರಿ ಬೈಪಾಸ್, ಎನ್‌ಎಚ್–565ರ ಲಿಂಗಸಮುದ್ರಂ ಹೈ–ಲೆವೆಲ್ ಸೇತುವೆ ಸೇರಿದಂತೆ ಹಲವು ರಸ್ತೆ ಯೋಜನೆಗಳನ್ನು ಉದ್ಘಾಟಿಸಲಾಯಿತು.

ಈ ಯೋಜನೆಗಳಿಂದ ಸಂಚಾರ ದಟ್ಟಣೆ ಕಡಿಮೆಯಾಗಲಿದ್ದು, ಸರಕು ಸಾಗಣೆ ವೇಗ ಹೆಚ್ಚಲಿದೆ. ರಸ್ತೆ ಸುರಕ್ಷತೆ ಸುಧಾರಿಸುವುದರ ಜೊತೆಗೆ ವಿಶಾಖಪಟ್ಟಣಂ–ಹೈದರಾಬಾದ್ ನಡುವಿನ ಪ್ರಯಾಣದ ಅವಧಿಯೂ ಗಣನೀಯವಾಗಿ ಕಡಿಮೆಯಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಅಭಿವೃದ್ಧಿಗೆ ಹೊಸ ಅಧ್ಯಾಯ:** ಭೋಗಾಪುರಂನಲ್ಲಿ ಉದ್ಘಾಟನೆಗೊಂಡ ವಿಮಾನ ನಿಲ್ದಾಣ ಹಾಗೂ ವಿವಿಧ ಮೂಲಸೌಕರ್ಯ ಯೋಜನೆಗಳು ಆಂಧ್ರಪ್ರದೇಶದ ಅಭಿವೃದ್ಧಿಗೆ ಹೊಸ ಅಧ್ಯಾಯ ಬರೆಯಲಿವೆ. ವಿಮಾನಯಾನ, ಕೈಗಾರಿಕೆ, ಸೆಮಿಕಂಡಕ್ಟರ್ ಉತ್ಪಾದನೆ, ಹಸಿರು ಇಂಧನ ಹಾಗೂ ರಸ್ತೆ ಮೂಲಸೌಕರ್ಯ ಕ್ಷೇತ್ರಗಳಲ್ಲಿ ನಡೆದಿರುವ ಈ ಬೃಹತ್ ಹೂಡಿಕೆಗಳು ರಾಜ್ಯದ ಆರ್ಥಿಕತೆಗೆ ಹೊಸ ಚೈತನ್ಯ ನೀಡಲಿವೆ. ಕೈಗಾರಿಕೆಗಳಿಗೆ ಉತ್ತಮ ಸಂಪರ್ಕ ವ್ಯವಸ್ಥೆ, ಹೂಡಿಕೆದಾರರಿಗೆ ಅನುಕೂಲಕರ ವಾತಾವರಣ ಹಾಗೂ ಯುವಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮೂಲಕ ಆಂಧ್ರಪ್ರದೇಶವನ್ನು ದೇಶದ ಪ್ರಮುಖ ಆರ್ಥಿಕ ಶಕ್ತಿಕೇಂದ್ರವನ್ನಾಗಿ ರೂಪಿಸುವಲ್ಲಿ ಈ ಯೋಜನೆಗಳು ಮಹತ್ವದ ಪಾತ್ರ ವಹಿಸಲಿವೆ.

# ತಮಿಳುನಾಡಿಗೆ ಕಾವೇರಿ ನೀರು ಹರಿಸದಂತೆ ಒತ್ತಾಯಿಸಿ ಮನವಿ




**ನೆಲಮಂಗಲ:** ಕಾವೇರಿ ಪ್ರಾಧಿಕಾರದ ಆದೇಶದಂತೆ ಪ್ರತಿದಿನ 3,500 ಕ್ಯೂಸೆಕ್ಸ್ ನೀರನ್ನು ತಮಿಳುನಾಡಿಗೆ ಹರಿಸುವ ಕ್ರಮವನ್ನು ಕರ್ನಾಟಕ ಸರ್ಕಾರ ಪಾಲಿಸಬಾರದು ಎಂದು ಒತ್ತಾಯಿಸಿ, ನೆಲಮಂಗಲ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ರಾಜ್ಯದ ರೈತರಿಗೆ ಅನ್ಯಾಯವಾಗಬಾರದು ಹಾಗೂ ರಾಜ್ಯದ ಹಲವು ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿರುವ ಹಿನ್ನೆಲೆಯಲ್ಲಿ, ಮೊದಲು ಕರ್ನಾಟಕದ ಜನತೆಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಹರಿಸಬಾರದು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

# ಸಿಎಂ ಭೇಟಿ, ಸಚಿವ ಸ್ಥಾನ ಪ್ರಶ್ನೆಗೆ ವಿನಯ್ ಕುಲಕರ್ಣಿ ಉತ್ತರ



**ಬೆಂಗಳೂರು:** ಜೈಲಿನಿಂದ ಬಿಡು ಗಡೆಯಾದ ಮಾಜಿ ಸಚಿವ ವಿನಯ್ ಕುಲಕರ್ಣಿ ಅವರು ಕುಟುಂಬ ಸಮೇತರಾಗಿ ಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಯಾಗಿದ್ದಾರೆ.

ಈ ವೇಳೆ ಅವರು ಮಾಧ್ಯಮಗಳ ಜೊತೆ, ಈಗ ನಾನು ಸಚಿವ ಸ್ಥಾನದ ಆಕಾಂಕ್ಷಿ ಅಲ್ಲ. ಸಿಎಂ ಜೊತೆಗೆ ಏನು ಚರ್ಚೆ ಮಾಡಿಲ್ಲ. ಮುಂದೆ ಮಾತನಾಡುತ್ತೇನೆ ಎಂದು ಹೇಳಿದ್ದಾರೆ.

ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಹಾಗೂ ಬಿಜೆಪಿ ಮುಖಂಡ ಯೋಗೇಶ್‌ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ತಡೆ ನೀಡಿ ಜಾಮೀನು ಮಂಜೂರು ಮಾಡಿದ ಹಿನ್ನೆಲೆಯಲ್ಲಿ ವಿನಯ್ ಕುಲಕರ್ಣಿ ಅವರು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬಿಡುಗಡೆಯಾಗಿದ್ದಾರೆ.

ಶುಕ್ರವಾರ ರಾತ್ರಿ ಜೈಲಿನಿಂದ ಹೊರಬಂದ ವಿನಯ್ ಕುಲಕರ್ಣಿ ಮಾಧ್ಯಮಗಳೊಂದಿಗೆ ಯಾವುದೇ ಪ್ರತಿಕ್ರಿಯೆ ನೀಡದೆ ನೇರವಾಗಿ ವಾಹನದಲ್ಲಿ ತೆರಳಿದರು. ಈ ವೇಳೆ ಜೈಲು ಹೊರಗೆ ಸೇರಿದ್ದ ಅಭಿಮಾನಿಗಳು ಅವರಿಗೆ ಹೂವಿನ ಹಾರ ಹಾಕಿ ಸ್ವಾಗತ ಕೋರಿದರು. ಕೆಲ ಅಭಿಮಾನಿಗಳೊಂದಿಗೆ ಶೇಕ್‌ಹ್ಯಾಂಡ್ ಮಾಡಿ ಅವರು ಅಲ್ಲಿಂದ ಡಾಲರ್ಸ್ ಕಾಲೋನಿಯಲ್ಲಿರುವ ತಮ್ಮ ನಿವಾಸದತ್ತ ತೆರಳಿದ್ದರು.

ಯೋಗೇಶ್‌ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ವಿನಯ್ ಕುಲಕರ್ಣಿ, ತಮ್ಮ ಶಿಕ್ಷೆಗೆ ತಡೆ ನೀಡುವಂತೆ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಶಿಕ್ಷೆಗೆ ತಾತ್ಕಾಲಿಕ ತಡೆ ನೀಡಿ ಇಂದು ಜಾಮೀನು ಮಂಜೂರು ಮಾಡಿದೆ. ವಿನಯ್ ಕುಲಕರ್ಣಿ ಸೇರಿದಂತೆ ಒಟ್ಟು 10 ಆರೋಪಿಗಳಿಗೆ ಜಾಮೀನು ನೀಡಲಾಗಿದೆ.

ಸಿಎಂ ಭೇಟಿಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿನಯ್ ಕುಲಕರ್ಣಿ, ತಾವು ಸದ್ಯ ಸಚಿವ ಸ್ಥಾನದ ಆಕಾಂಕ್ಷಿಯಲ್ಲ ಎಂದು ಸ್ಪಷ್ಟಪಡಿಸಿದರು. ಮುಖ್ಯಮಂತ್ರಿಯವರೊಂದಿಗೆ ಯಾವುದೇ ರಾಜಕೀಯ ಅಥವಾ ಸಚಿವ ಸಂಪುಟಕ್ಕೆ ಸಂಬಂಧಿಸಿದ ಚರ್ಚೆ ನಡೆದಿಲ್ಲ ಎಂದು ಹೇಳಿದ ಅವರು, ಸದ್ಯ ನ್ಯಾಯಾಂಗ ಪ್ರಕ್ರಿಯೆಗೆ ಗೌರವ ನೀಡಿ ಮುಂದಿನ ದಿನಗಳಲ್ಲಿ ಸೂಕ್ತ ಸಮಯದಲ್ಲಿ ತಮ್ಮ ಮುಂದಿನ ರಾಜಕೀಯ ನಡೆ ಹಾಗೂ ಇತರ ವಿಷಯಗಳ ಕುರಿತು ವಿವರವಾಗಿ ಮಾತನಾಡುವುದಾಗಿ ತಿಳಿಸಿದರು.

ವಿನಯ್ ಕುಲಕರ್ಣಿ ಅವರ ಜಾಮೀನು ಹಾಗೂ ಮುಖ್ಯಮಂತ್ರಿ ಭೇಟಿ ರಾಜ್ಯ ರಾಜಕೀಯದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು, ಕಾಂಗ್ರೆಸ್ ವಲಯದಲ್ಲೂ ಕುತೂಹಲ ಮೂಡಿಸಿದೆ. ಆದರೆ ಈ ಬಗ್ಗೆ ಯಾವುದೇ ಊಹಾಪೋಹಗಳಿಗೆ ಪ್ರತಿಕ್ರಿಯಿಸದ ವಿನಯ್ ಕುಲಕರ್ಣಿ, ಸದ್ಯ ಕುಟುಂಬದೊಂದಿಗೆ ಸಮಯ ಕಳೆಯಲು ಬಯಸಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ನಾಯಕತ್ವದ ಮಾರ್ಗದರ್ಶನದಂತೆ ರಾಜಕೀಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದಾಗಿ ತಿಳಿಸಿದರು.

ಸಿಎಂ ಭೇಟಿ ರಾಜಕೀಯ ವಲಯದಲ್ಲಿ ಹಲವು ಚರ್ಚೆಗಳಿಗೆ ಕಾರಣವಾದರೂ, ಅದಕ್ಕೆ ಹೆಚ್ಚಿನ ಮಹತ್ವ ನೀಡದ ವಿನಯ್ ಕುಲಕರ್ಣಿ, ಸದ್ಯ ನ್ಯಾಯಾಂಗ ಪ್ರಕ್ರಿಯೆಯ ಮೇಲೆ ಗಮನ ಹರಿಸಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ನಾಯಕತ್ವದ ಸೂಚನೆಯಂತೆ ರಾಜಕೀಯ ಚಟುವಟಿಕೆಗಳಲ್ಲಿ ಭಾಗವಹಿಸುವುದಾಗಿ ತಿಳಿಸಿದರು. ಬೆಂಬಲ ನೀಡಿದ ನಾಯಕರು, ಕಾರ್ಯಕರ್ತರು ಹಾಗೂ ಅಭಿಮಾನಿಗಳಿಗೆ ಅವರು ಕೃತಜ್ಞತೆ ಸಲ್ಲಿಸಿದರು.

# ತ್ಯಾಜ್ಯದಿಂದ ಸ್ವಾತಂತ್ರ್ಯ: ಜಸ್ಟ್ ಕ್ಲೀನ್ ಬೆಂಗಳೂರು ಅಭಿಯಾನಕ್ಕೆ ಚಾಲನೆ



**ಬೆಂಗಳೂರು:** ರಾಜಧಾನಿ ಬೆಂಗಳೂರನ್ನು ಸಂಪೂರ್ಣ ಸ್ವಚ್ಛ, ಸುಂದರ ಹಾಗೂ ತ್ಯಾಜ್ಯ ಮುಕ್ತ ನಗರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮತ್ತಷ್ಟು ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೆ ತರುತ್ತಿದ್ದು, ಅನುಮತಿ ಇಲ್ಲದೆ ಎಲ್ಲೆಂದರಲ್ಲಿ ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿಯುವ ವಾಹನಗಳನ್ನು ಯಾವುದೇ ಮುಲಾಜಿಲ್ಲದೆ ವಶಕ್ಕೆ (ಸೀಜ್) ಪಡೆಯಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಅವರು ನಗರ ಪೊಲೀಸರಿಗೆ ಸ್ಪಷ್ಟ ಸೂಚನೆ ನೀಡಿದರು.

ಶನಿವಾರ ನಗರದ ಹೆಬ್ಬಾಳ ಜಂಕ್ಷನ್‌ನ ನಾಡಪ್ರಭು ಕೆಂಪೇಗೌಡ ಪ್ರತಿಮೆ ಬಳಿ 'ತ್ಯಾಜ್ಯದಿಂದ ಸ್ವಾತಂತ್ರ್ಯ – ಜಸ್ಟ್ ಕ್ಲೀನ್ ಬೆಂಗಳೂರು' ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬೆಂಗಳೂರು ಕೇವಲ ಸರ್ಕಾರದ ನಗರವಲ್ಲ, ಅದು ಇಲ್ಲಿ ವಾಸಿಸುವ ಪ್ರತಿಯೊಬ್ಬ ನಾಗರಿಕರ ಆಸ್ತಿಯಾಗಿದೆ. ನಗರದ ಸ್ವಚ್ಛತೆ ಕಾಪಾಡುವುದು ಸರ್ಕಾರದಷ್ಟೇ ಸಾರ್ವಜನಿಕರ ಜವಾಬ್ದಾರಿಯೂ ಆಗಿದ್ದು, ನಾಗರಿಕರು ತಮ್ಮ ಹೊಣೆಗಾರಿಕೆಯನ್ನು ಅರಿತು ಸಹಕರಿಸಬೇಕು ಎಂದು ಮನವಿ ಮಾಡಿದರು.

ನಗರದ ವಿವಿಧ ಭಾಗಗಳಲ್ಲಿ ಘನತ್ಯಾಜ್ಯ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯವನ್ನು ಅನಧಿಕೃತವಾಗಿ ಸುರಿಯುತ್ತಿರುವ ವಾಹನಗಳ ವಿರುದ್ಧ ಈಗಾಗಲೇ ನೋಟಿಸ್‌ಗಳನ್ನು ನೀಡಲಾಗಿದೆ. ಹಲವೆಡೆ ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿಗಾ ವಹಿಸಲಾಗುತ್ತಿದೆ. ಆದರೂ ಕೆಲವು ವಾಹನಗಳು ನಿಯಮ ಉಲ್ಲಂಘಿಸಿ ಮತ್ತೆ ಅದೇ ರೀತಿಯಲ್ಲಿ ಕಸ ಸುರಿಯುತ್ತಿರುವುದು ಕಂಡುಬಂದಿದೆ. ಆದ್ದರಿಂದ ಇನ್ನು ಮುಂದೆ ಎಚ್ಚರಿಕೆ ಅಥವಾ ನೋಟಿಸ್‌ಗಳಿಗೆ ಮಾತ್ರ ಸೀಮಿತವಾಗದೇ, ನಿಯಮ ಉಲ್ಲಂಘಿಸುವ ವಾಹನಗಳನ್ನು ನೇರವಾಗಿ ವಶಪಡಿಸಿಕೊಳ್ಳುವಂತೆ ಪೊಲೀಸರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಜನರಲ್ಲಿ ನಾಗರಿಕ ಪ್ರಜ್ಞೆ ಬೆಳೆಸುವುದು ಅತ್ಯಂತ ಮುಖ್ಯವಾಗಿದೆ. ರಸ್ತೆ ಬದಿ, ಖಾಲಿ ನಿವೇಶನ, ಕೆರೆಗಳ ಬಳಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಕಸ ಸುರಿಯುವ ಪ್ರವೃತ್ತಿಗೆ ಸಂಪೂರ್ಣ ಕಡಿವಾಣ ಹಾಕಬೇಕು. ಸಾರ್ವಜನಿಕರು ಸಹ ನಿಯಮಗಳನ್ನು ಪಾಲಿಸಿ ನಿಗದಿತ ಸ್ಥಳಗಳಲ್ಲಿಯೇ ತ್ಯಾಜ್ಯ ವಿಲೇವಾರಿ ಮಾಡಬೇಕು ಎಂದು ಅವರು ಹೇಳಿದರು.

**22 ಸಾವಿರ ಟನ್‌ಗೂ ಅಧಿಕ ತ್ಯಾಜ್ಯ ತೆರವಿಗೆ ಯೋಜನೆ:** 'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನದಡಿ ನಗರದ ವಿವಿಧ ಭಾಗಗಳಲ್ಲಿ ಸಂಗ್ರಹವಾಗಿರುವ 22,372 ಟನ್‌ಗಳಷ್ಟು ತ್ಯಾಜ್ಯವನ್ನು ತೆರವುಗೊಳಿಸಲು ಸರ್ಕಾರ ಗುರಿ ಹೊಂದಿದೆ. ಇದರಲ್ಲಿ ಕಟ್ಟಡ ನಿರ್ಮಾಣ ತ್ಯಾಜ್ಯ (ಸಿ & ಡಿ ವೇಸ್ಟ್), ಘನತ್ಯಾಜ್ಯ, ಹಳೆಯ ವಿದ್ಯುತ್ ಕಂಬಗಳು, ಬಳಕೆಯಲ್ಲದ ಪೈಪ್‌ಗಳು, ಮಣ್ಣಿನ ರಾಶಿಗಳು, ಬೆಳೆದಿರುವ ಕಳೆಗಿಡಗಳು, ಮರದ ಕೊಂಬೆಗಳು ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟುಮಾಡುತ್ತಿರುವ ವಿವಿಧ ತ್ಯಾಜ್ಯಗಳನ್ನು ತೆರವುಗೊಳಿಸಲಾಗುತ್ತದೆ ಎಂದು ತಿಳಿಸಿದರು.

ನಗರದ 1,600ಕ್ಕೂ ಹೆಚ್ಚು ಸ್ಥಳಗಳಲ್ಲಿ ಅನಧಿಕೃತವಾಗಿ ಕಸ ಹಾಗೂ ಕಟ್ಟಡ ಅವಶೇಷಗಳು ಸಂಗ್ರಹವಾಗಿರುವುದು ಪತ್ತೆಯಾಗಿದ್ದು, ವಿಶೇಷ ಕಾರ್ಯಾಚರಣೆ ಮೂಲಕ ಎಲ್ಲ ಪ್ರದೇಶಗಳನ್ನು ಸ್ವಚ್ಛಗೊಳಿಸಲಾಗುವುದು. ಈ ಕಾರ್ಯಾಚರಣೆಯಲ್ಲಿ ಬಿಬಿಎಂಪಿ, ಪೊಲೀಸ್ ಇಲಾಖೆ ಹಾಗೂ ವಿವಿಧ ಸರ್ಕಾರಿ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಲಿವೆ ಎಂದು ಹೇಳಿದರು.

**ಖಾಲಿ ನಿವೇಶನಗಳಿಗೆ ಕಠಿಣ ನಿಯಮ:** ಈ ವೇಳೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ), ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ), ಹಿಂದಿನ ಸಿಐಟಿಬಿ ಹಾಗೂ ವಿವಿಧ ಹೌಸಿಂಗ್ ಸೊಸೈಟಿಗಳಿಂದ ನಿವೇಶನ ಪಡೆದ ಮಾಲೀಕರಿಗೂ ಡಿ.ಕೆ. ಶಿವಕುಮಾರ್ ಎಚ್ಚರಿಕೆ ನೀಡಿದರು. ಸರ್ಕಾರ ನಿವೇಶನ ನೀಡುವುದು ಮನೆ ನಿರ್ಮಿಸಲು ಹೊರತು, ವರ್ಷಾನುಗಟ್ಟಲೆ ಖಾಲಿ ಬಿಡುವುದಕ್ಕಲ್ಲ. ನಿವೇಶನ ಹಂಚಿಕೆಯಾದ ಐದು ವರ್ಷಗಳೊಳಗೆ ಕಡ್ಡಾಯವಾಗಿ ಮನೆ ನಿರ್ಮಿಸಬೇಕು. ಇಲ್ಲವಾದರೆ ಅಂತಹ ಖಾಲಿ ನಿವೇಶನಗಳಿಗೆ ದುಪ್ಪಟ್ಟು ಆಸ್ತಿ ತೆರಿಗೆ ವಿಧಿಸುವುದು ಅಥವಾ ಅಗತ್ಯವಿದ್ದರೆ ಮಾಲೀಕರು ಪಾವತಿಸಿದ ಹಣವನ್ನು ಬಡ್ಡಿ ಸಮೇತ ಹಿಂದಿರುಗಿಸಿ ನಿವೇಶನವನ್ನು ಸರ್ಕಾರವೇ ವಾಪಸ್ ಪಡೆಯುವಂತಹ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. 20, 30 ಅಥವಾ 40 ವರ್ಷಗಳಿಂದಲೂ ಮನೆ ನಿರ್ಮಿಸದೆ ನಿವೇಶನಗಳನ್ನು ಖಾಲಿ ಬಿಟ್ಟಿರುವುದು ನಗರದ ಅಭಿವೃದ್ಧಿಗೆ ಅಡ್ಡಿಯಾಗುತ್ತಿದೆ ಎಂದು ಹೇಳಿದರು.

ಖಾಲಿ ನಿವೇಶನಗಳು ಕಸದ ತಾಣಗಳಾಗಿ ಪರಿವರ್ತನೆಯಾಗುತ್ತಿರುವುದರಿಂದ, ನಿವೇಶನಗಳಿಗೆ ಕಾಂಪೌಂಡ್ ನಿರ್ಮಿಸಿ ಸ್ವಚ್ಛತೆ ಕಾಪಾಡುವುದು ಮಾಲೀಕರ ಜವಾಬ್ದಾರಿಯಾಗಿದೆ. ಆಗಸ್ಟ್ 15ರೊಳಗೆ ಖಾಲಿ ನಿವೇಶನಗಳಲ್ಲಿರುವ ಕಸ, ಕಟ್ಟಡ ನಿರ್ಮಾಣ ತ್ಯಾಜ್ಯ, ಮಣ್ಣಿನ ರಾಶಿ, ಪೊದೆ ಹಾಗೂ ಕಳೆಗಳನ್ನು ತೆರವುಗೊಳಿಸುವಂತೆ ಗಡುವು ನೀಡಲಾಗಿದೆ. ಗಡುವಿನ ಬಳಿಕ ಸಂಬಂಧಪಟ್ಟ ನಗರ ಪಾಲಿಕೆ ಅಥವಾ ಜಿಬಿಎ ಅಧಿಕಾರಿಗಳು ಸ್ವತಃ ಸ್ವಚ್ಛತಾ ಕಾರ್ಯ ನಡೆಸಿ ಅದರ ವೆಚ್ಚವನ್ನು ಆಸ್ತಿ ತೆರಿಗೆಗೆ ಸೇರಿಸಿ ವಸೂಲಿ ಮಾಡಲಿದ್ದಾರೆ. ಮೊದಲ ಬಾರಿ ನಿಯಮ ಉಲ್ಲಂಘಿಸಿದವರಿಗೆ 25 ಸಾವಿರ ದಂಡ, ಮರು ಉಲ್ಲಂಘನೆಗೆ 50 ಸಾವಿರದಿಂದ 1 ಲಕ್ಷದವರೆಗೆ ದಂಡ ವಿಧಿಸಲಾಗುವುದು. ಜೊತೆಗೆ, ಸಾರ್ವಜನಿಕರು ಅನಧಿಕೃತವಾಗಿ ಕಸ ಸುರಿಯುವವರ ಫೋಟೋ ಹಾಗೂ ಜಿಪಿಎಸ್ ಸ್ಥಳದ ಮಾಹಿತಿಯನ್ನು ವಾಟ್ಸಾಪ್ ಸಂಖ್ಯೆ 94481 97197ಕ್ಕೆ ಕಳುಹಿಸಿ ದೂರು ನೀಡುವಂತೆ ಮುಖ್ಯಮಂತ್ರಿ ಮನವಿ ಮಾಡಿದರು.

**ಸ್ವಚ್ಛ ಬೆಂಗಳೂರು ನಿರ್ಮಾಣಕ್ಕೆ ಸರ್ಕಾರ ಬದ್ಧ:** ಈ ಅಭಿಯಾನದ ಮುಖ್ಯ ಉದ್ದೇಶ ನಗರದ ಸ್ವಚ್ಛತೆ, ಸೌಂದರ್ಯ ಮತ್ತು ಸಾರ್ವಜನಿಕ ಆರೋಗ್ಯವನ್ನು ಸುಧಾರಿಸುವುದಾಗಿದೆ. ತ್ಯಾಜ್ಯ ನಿರ್ವಹಣೆಯಲ್ಲಿ ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಂಡು ಬೆಂಗಳೂರನ್ನು ದೇಶದ ಮಾದರಿ ಮಹಾನಗರವನ್ನಾಗಿ ರೂಪಿಸಲು ಸರ್ಕಾರ ಬದ್ಧವಾಗಿದೆ. ಸಾರ್ವಜನಿಕರ ಸಹಕಾರವಿಲ್ಲದೆ ಯಾವುದೇ ಅಭಿಯಾನ ಯಶಸ್ವಿಯಾಗುವುದಿಲ್ಲ. ಆದ್ದರಿಂದ ಪ್ರತಿಯೊಬ್ಬರೂ ನಗರದ ಸ್ವಚ್ಛತೆಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಡಿ.ಕೆ. ಶಿವಕುಮಾರ್ ಮನವಿ ಮಾಡಿದರು.

ನಗರದಲ್ಲಿ ಹಸಿರು ವಾತಾವರಣ ಹೆಚ್ಚಿಸುವ ಕುರಿತು ಸರ್ಕಾರ ವಿಶೇಷ ಯೋಜನೆ ರೂಪಿಸುತ್ತಿದೆ. ಈ ಬಗ್ಗೆ ತಮ್ಮಲ್ಲಿ ವಿಭಿನ್ನ ಆಲೋಚನೆಗಳಿದ್ದು, ಅವುಗಳನ್ನು ಈಗ ಬಹಿರಂಗಪಡಿಸುವುದಿಲ್ಲ. ಸರ್ಕಾರದ 100 ದಿನಗಳ ವಿಶೇಷ ಕಾರ್ಯಕ್ರಮದ ವೇಳೆ ಹೊಸ ಯೋಜನೆಗಳನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು.

**ಟೀಕೆಗಳು ಬರುತ್ತವೆ, ಆದರೆ ಕೆಲಸ ಶಾಶ್ವತ:** ಬೆಂಗಳೂರು ಸ್ವಚ್ಛತೆ ಕುರಿತು ಹಲವು ರೀತಿಯ ಟೀಕೆಗಳು ಕೇಳಿಬರುತ್ತಿವೆ. ಆದರೆ ಸರ್ಕಾರ ಕೈಗೊಳ್ಳುತ್ತಿರುವ ಅಭಿವೃದ್ಧಿ ಹಾಗೂ ಸ್ವಚ್ಛತಾ ಕಾರ್ಯಗಳು ದೀರ್ಘಕಾಲ ಉಳಿಯುವಂತಹವು. ಟೀಕೆಗಳು ಕಾಲಕ್ರಮೇಣ ಮರೆಯಾಗುತ್ತವೆ, ಆದರೆ ನಗರಕ್ಕಾಗಿ ಮಾಡುತ್ತಿರುವ ಕೆಲಸಗಳು ಶಾಶ್ವತವಾಗಿ ಜನರಿಗೆ ಪ್ರಯೋಜನವಾಗಲಿವೆ ಎಂದು ಅವರು ಹೇಳಿದರು.

**ಅಧಿಕಾರಿಗಳ ಮೇಲಿನ ದಾಳಿ ಸರ್ಕಾರದ ಮೇಲಿನ ದಾಳಿ:** ಇದೇ ವೇಳೆ ಶಿವಾಜಿನಗರದಲ್ಲಿ ಪಾದಚಾರಿ ಮಾರ್ಗಗಳ ಅತಿಕ್ರಮಣ ತೆರವು ಕಾರ್ಯಾಚರಣೆ ವೇಳೆ ಅಧಿಕಾರಿಗಳ ಮೇಲೆ ನಡೆದ ದಾಳಿಯನ್ನು ಖಂಡಿಸಿದ ಡಿ.ಕೆ. ಶಿವಕುಮಾರ್, ಇದನ್ನು ಕೇವಲ ಅಧಿಕಾರಿಗಳ ಮೇಲಿನ ದಾಳಿ ಎಂದು ನೋಡಬಾರದು. ಇದು ಸರ್ಕಾರ, ಸಚಿವರು ಹಾಗೂ ಜನರಿಂದ ಆಯ್ಕೆಯಾದ ಶಾಸಕರ ಮೇಲಿನ ದಾಳಿಯಾಗಿದೆ ಎಂದು ಹೇಳಿದರು.

ಪಾದಚಾರಿ ಮಾರ್ಗಗಳನ್ನು ಸಾರ್ವಜನಿಕರಿಗಾಗಿ ಮುಕ್ತಗೊಳಿಸುವ ಕಾರ್ಯವನ್ನು ಎಲ್ಲಾ ಪಕ್ಷಗಳ ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೈಗೊಳ್ಳಲಾಗಿದೆ. ಸಾರ್ವಜನಿಕ ಹಿತಾಸಕ್ತಿಗಾಗಿ ನಡೆಯುತ್ತಿರುವ ಈ ಕಾರ್ಯಾಚರಣೆಗೆ ಯಾರೂ ಅಡ್ಡಿಪಡಿಸಬಾರದು. ಕಾನೂನು ಕೈಗೆತ್ತಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್, ಸಂಸದೆ ಶೋಭಾ ಕರಂದ್ಲಾಜೆ, ಶಾಸಕರಾದ ಎಸ್.ಆರ್. ವಿಶ್ವನಾಥ್ ಹಾಗೂ ಎ.ಸಿ. ಶ್ರೀನಿವಾಸ್, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಎಂ. ಮಹೇಶ್ವರ್ ರಾವ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಬಿಬಿಎಂಪಿ ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು. ಸರ್ಕಾರದ 'ತ್ಯಾಜ್ಯದಿಂದ ಸ್ವಾತಂತ್ರ್ಯ– ಜಸ್ಟ್ ಕ್ಲೀನ್ ಬೆಂಗಳೂರು' ಅಭಿಯಾನಕ್ಕೆ ವ್ಯಾಪಕ ಜನಸಹಭಾಗಿತ್ವ ದೊರೆತರೆ ಬೆಂಗಳೂರನ್ನು ದೇಶದ ಅತ್ಯಂತ ಸ್ವಚ್ಛ ಹಾಗೂ ಸುಂದರ ನಗರವನ್ನಾಗಿ ರೂಪಿಸುವ ಗುರಿ ಸಾಧಿಸಬಹುದು ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.